ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

06 (20) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಡಿ. ಹೊಸಹಳ್ಳಿ ಗ್ರಾಮದಲ್ಲಿ ಮೂಲಭೂತ ಸೌಲಭ್ಯಗಳಾದ ರಸ್ತೆ, ಸಿ.ಸಿ. ಚರಂಡಿ, ವಿದ್ಯುತ್ ಬೀದಿ ದೀಪ ಹಾಗೂ ಕುಡಿಯುವ ನೀರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಈ ಬಗ್ಗೆ ಗಮನಕ್ಕೆ ತಂದಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ, ಮೂಲಭೂತ ಸೌಲಭ್ಯಗಳು ಗ್ರಾಮಕ್ಕೆ ದೊರಕದೇ ವಂಚಿತರಾಗಿದ್ದು, ಗ್ರಾಮ ಸ್ವರಾಜ್ ಕನಸು ನನಸಾಗದೇ ಉಳಿದು ಗ್ರಾಮಸ್ಥರಿಗೆ ಅನಾನುಕೂಲ ಆಗಿರುವುದರಿಂದ ಇದನ್ನು ತಪ್ಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ;

(ಇ) ಹಾಗಿದ್ದಲ್ಲಿ, ಎಷ್ಟು ಸಮಯದೊಳಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು? (ಮಾಹಿತಿಯನ್ನು ಒದಗಿಸುವುದು)